ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 10/3/2021

# ಕೆಣಕಿದವರ ಸುಮ್ನೆ ಬಿಡಲ್ಲ

## ಶೋ ಮ್ಯಾನ್ ಕೈವಾಡ ಎಂದ ಜಾರಕಿಹೊಳಿ | ಸಿಡಿ ಹಿಂದೆ 2+3+4 ಫಾರ್ಮುಲಾ: ಎಚ್.ಡಿ.ಕುಮಾರಸ್ವಾಮಿ | ಡಿಕೆಶಿ ಮೇಲೆ ಊಹಾಪೋಹ, ಸೈನಿಕನ ಮೇಲೆ ಗುಮಾನಿ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಸಿಡಿ ಬಿಡುಗಡೆ ನಂತರ ಮೊದಲ ಬಾರಿಗೆ ಸಾರ್ವಜನಿಕವಾಗಿ ಕಾಣಿಸಿಕೊಂಡ ರಮೇಶ್ ಜಾರಕಿಹೊಳಿ, ತಮ್ಮ ವಿರುದ್ಧ ನಡೆದಿರುವ ಷಡ್ಯಂತ್ರದ ಕುರಿತು ಉನ್ನತ ಮಟ್ಟದ ತನಿಖೆಗೆ ಒತ್ತಾಯಿಸುವುದಾಗಿ ತಿಳಿಸಿದ್ದಾರೆ.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಇದು ಶೇ.100ರಷ್ಟು ನಕಲಿ ಸಿಡಿ. ನಾನು ಅಪರಾಧಿಯಲ್ಲ, ನಿರಪರಾಧಿ. ಈ ಸಿಡಿ ಬಗ್ಗೆ 4 ತಿಂಗಳ ಹಿಂದೆಯೇ ಷಡ್ಯಂತ್ರ ಮಾಡಿದ್ದಾರೆ. ನನ್ನ ವಿರುದ್ಧ ಷಡ್ಯಂತ್ರ ಮಾಡಿದವರನ್ನು ಯಾವುದೇ ಕಾರಣಕ್ಕೂ ಬಿಡಲ್ಲ. ಎಷ್ಟೇ ಪ್ರಭಾವಿಗಳಾದರೂ ನಾನು ಬಿಡಲ್ಲ' ಎಂದರು.

'ನನ್ನ ವಿರುದ್ಧ ರಾಜಕೀಯ ಷಡ್ಯಂತ್ರ ನಡೆದಿದೆ. ದಯವಿಟ್ಟು ನನಗೆ ಬೆಂಬಲ ನೀಡಿ' ಎಂದು ಮನವಿ ಮಾಡಿದ್ದಾರೆ. ಸಿಡಿಗೆ 20 ಕೋಟಿ ರು. ಖರ್ಚು ಮಾಡಲಾಗಿದೆ. ಯಶವಂತಪುರ ಮತ್ತು ಹುಳಿಮಾವು ಎರಡು ಕಡೆ ಷಡ್ಯಂತ್ರ ರೂಪಿಸಲಾಗಿದೆ' ಎಂದು ಆರೋಪಿಸಿದ್ದಾರೆ.

'ಓರಾಯನ್ ಮಾಲ್ ಬಳಿಯ 4, 5 ನೇ ಮಹಡಿಯ ಫ್ಲ್ಯಾಟ್‌ನಲ್ಲಿ ಷಡ್ಯಂತ್ರ ನಡೆದಿದೆ. ರಾಜಕೀಯ ಏಳಿಗೆ ಸಹಿಸದೆ ಈ ಸಂಚು ನಡೆಸಲಾಗಿದೆ. ನನಗೆ ಕುಟುಂಬದ ಗೌರವ ಮುಖ್ಯ. ರಾಜಕಾರಣಿಯಾಗಿ ಇರಲು ಆಸಕ್ತಿ ಇಲ್ಲ, ರಾಜಮನೆತನ ನನ್ನದು. ನನ್ನ ಕುಟುಂಬದ ಗೌರವ ವಾಪಸು ಬರಬೇಕು. ರಾಜಕಾರಣಕ್ಕೆ ಮತ್ತೆ ಬರುತ್ತೇನೊ, ಬಿಡುತ್ತೇನೊ ಗೊತ್ತಿಲ್ಲ. ಆದರೆ, ಈ ರೀತಿ ಮಾಡಿದವರನ್ನು ಜೈಲಿಗೆ ಹಾಕಿಸದೆ ಬಿಡಲ್ಲ' ಎಂದು ರಮೇಶ್ ಜಾರಕಿಹೊಳಿ ಗುಡುಗಿದ್ದಾರೆ.

'ರಾಜೀನಾಮೆ ನೀಡಿರುವುದು ನನ್ನ ವೈಯಕ್ತಿಕ ನಿರ್ಧಾರ. 26 ಗಂಟೆ ಮೊದಲೇ ನನಗೆ ಹೈಕಮಾಂಡ್‌ನಿಂದ ಸಿಡಿ ಬಿಡುಗಡೆ ಬಗ್ಗೆ ಮಾಹಿತಿ ಸಿಕ್ಕಿತ್ತು. ಮುಖ್ಯಮಂತ್ರಿ ಯಡಿಯೂರಪ್ಪ, ಮಾಜಿ ಸಿಎಂ ಕುಮಾರಸ್ವಾಮಿ ಸೇರಿದಂತೆ ಅನೇಕರು ನೀನು ಧೈರ್ಯವಾಗಿ ಇರು ಎಂದೂ ಹೇಳಿದ್ದರು. ಇಂತಹ ಆರೋಪಗಳನ್ನು ಧೈರ್ಯವಾಗಿ ಎದುರಿಸುತ್ತೇನೆ' ಎಂದರು.

### ಮಹಾನ್ ನಾಯಕನ ಮೇಲೆ ಅನುಮಾನ

ರಾಜಕೀಯ ನಾಯಕರ ಮೇಲೆ ರಮೇಶ್ ಜಾರಕಿಹೊಳಿ ಅನುಮಾನ ವ್ಯಕ್ತಪಡಿಸಿದ್ದಾರೆ. ನಾನು ಸಚಿವನಾಗಿ ಅಧಿಕಾರ ಸ್ವೀಕರಿಸಿದಾಗ ನಾನು 3 ತಿಂಗಳು ಇಲಾಖೆ ನಿರ್ವಹಿಸಲಾಗುವುದಿಲ್ಲ ಎಂದು ಆ ಮಹಾನ್ ನಾಯಕ ಚಾಲೆಂಜ್ ಮಾಡಿದ್ದ. ಆತನೇ ಷಡ್ಯಂತ್ರ ನಡೆಸಿರುವ ಸಾಧ್ಯತೆ ಇದೆ. ಆದರೆ, ಆತನ ಹೆಸರು ಹೇಳಲು ಇಚ್ಛಿಸುವುದಿಲ್ಲ ಎಂದು ಹೇಳಿದ್ದಾರೆ.

### ಯುವತಿಗೆ ₹ 5 ಕೋಟಿ

'ಯುವತಿಗೆ ₹ 50 ಲಕ್ಷವಲ್ಲ, ₹ 5 ಕೋಟಿ ನೀಡಿದ್ದಾರೆ. ವಿದೇಶದಲ್ಲಿ ಎರಡು ಫ್ಲ್ಯಾಟ್ ಕೊಡಿಸಿರುವ ಮಾಹಿತಿ ಇದೆ, ಸಿಡಿ ಮಾಡಲು ನೂರಾರು ಕೋಟಿ ಖರ್ಚು ಆಗಿದೆ.' ಎಂದು ರಮೇಶ್ ಜಾರಕಿಹೊಳಿ ಹೇಳಿದರು.

### ರಮೇಶ್ ಅಮಾಯಕ ಎಚ್‌ಡಿಕೆ

'ರಮೇಶ್ ಜಾರಕಿಹೊಳಿ ಅಮಾಯಕರು. ಅವರು ನನ್ನ ಸರಕಾರ ಬೀಳಿಸುವಂತಿದ್ದರೆ ಬೆಂಗಳೂರಿನಲ್ಲೇ ಇದ್ದು ಬೀಳಿಸುತ್ತಿದ್ದರು. ಅವರನ್ನು ಮುಂಬೈಗೆ ಕರೆದೊಯ್ದಿದ್ದೇ ಬೇರೆಯವರು.



ಇಂತಹ ವಿಷಯಗಳಲ್ಲಿ ರಾಜಕೀಯ ಮಾಡುವುದು ಸರಿಯಲ್ಲ. ಇಬ್ಬರು ಮುಂಬೈಗೆ ಕರೆದುಕೊಂಡು ಹೋದವರು, ಅಲ್ಲಿ ಉಳಿಯಲು ವ್ಯವಸ್ಥೆ ಮಾಡಿದ್ದ ಮೂವರು, ಜತೆಗೆ ಉಳಿದ ನಾಲ್ವರು ಸೇರಿ ಅವರ ವಿರುದ್ಧ ಷಡ್ಯಂತ್ರ ಮಾಡಿರಬಹುದು' ಎಂದು ಕುಮಾರಸ್ವಾಮಿ ಆರೋಪಿಸಿದ್ದಾರೆ.

### ಜಾರಕಿಹೊಳಿ ಹೇಳಿದ್ದೇನು?

- ರಾಜಕೀಯವಾಗಿ ಮುಗಿಸಲು ಕೋಟ್ಯಂತರ ಖರ್ಚು
- ಉತ್ತರ ಕರ್ನಾಟಕದವರಲ್ಲ, ಬೆಂಗಳೂರಿನವರಿಂದಲೇ ಷಡ್ಯಂತ್ರ
- ನನ್ನ ಮನೆ ಸುತ್ತಲಿನವರಿಂದಲೇ ಪಿತೂರಿ
- ಜತೆಯಲ್ಲಿದ್ದವರಿಂದಲೇ ನನಗೆ ಮೋಸ
- ಸಮಗ್ರ ತನಿಖೆ ನಡೆಸುವಂತೆ ಸಿಎಂಗೆ ಮನವಿ
- ಕೆಟ್ಟ ಹೆಸರು ತಂದವರನ್ನು ಜೈಲಿಗೆ ಕಳಿಸುವವರೆಗೆ ಬಿಡುವುದಿಲ್ಲ

### ಬುಕ್ ಆಫ್ ಲಾ ಪ್ರಕಾರ ತನಿಖೆ



'ಮಾಜಿ ಸಚಿವ ರಮೇಶ್ ಜಾರಕಿಹೊಳಿ ಪ್ರಕರಣದ ಕುರಿತು ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಈ ಬಗ್ಗೆ ಬುಕ್ ಆಫ್ ಲಾ ಪ್ರಕಾರ ತನಿಖೆ ನಡೆಸಲಾಗುವುದು. ಎಲ್ಲ ವಿಚಾರಣೆ ಕಾನೂನು ಪ್ರಕಾರ ನಡೆಯುತ್ತದೆ ಎಂದರು. ದೂರು ಬಂದ ನಂತರ ಪೊಲೀಸರು ವಿಚಾರಣೆ ಆರಂಭಿಸಿದ್ದಾರೆ. ಎಲ್ಲವನ್ನೂ ಕಾನೂನು ಪ್ರಕಾರ ತನಿಖೆಗೆ ಒಳಪಡಿಸಲಾಗುವುದು' ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿದರು.

### ದೂರು ವಾಪಸ್ ಪಡೆದ ದಿನೇಶ್

ದಿನೇಶ್ ಕಲ್ಲಹಳ್ಳಿ ಖುದ್ದಾಗಿ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ ಆಗಮಿಸಿ ಸಿಡಿ ಪ್ರಕರಣಕ್ಕೆ ಸಂಬಂಧಿಸಿ ನೀಡಿದ್ದ ದೂರನ್ನು ವಾಪಸ್ ಪಡೆದಿದ್ದಾರೆ.



ಮೂರು ದಿನಗಳ ಹಿಂದೆಯೇ ಎಚ್‌ಡಿಕೆ ಆರೋಪಕ್ಕೆ ಬೆಸತ್ತು ದೂರು ವಾಪಸ್ ಪಡೆಯುತ್ತೇನೆ ಎಂದಿದ್ದ ದಿನೇಶ್, ವಕೀಲರ ಮೂಲಕ ದೂರು ವಾಪಸ್ ಪಡೆಯುವ ಯತ್ನ ನಡೆಸಿದ್ದರು. ಆದರೆ, ಪೊಲೀಸರು ಖುದ್ದಾಗಿ ಬಂದು ದೂರು ವಾಪಸ್ ಪಡೆಯುವಂತೆ ಸೂಚಿಸಿದ್ದರು. ಹೀಗಾಗಿ, ಮಂಗಳವಾರ ದಿಢೀರನೆ ಠಾಣೆಗೆ ಆಗಮಿಸಿದ ದಿನೇಶ್ ಕಲ್ಲಹಳ್ಳಿ ತಾವು ನೀಡಿದ್ದ ದೂರನ್ನು ವಾಪಸ್ ಪಡೆದಿದ್ದಾರೆ.